ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು.

ವಿಧೇಯಕವನ್ನು ಪರ್ಯಾಲೋಚಿಸುವುದು.

ಖಂಡ 2 ರಿಂದ 4ರವರೆಗೆ ವಿಧೇಯಕವನ್ನು ಪರ್ಯಾಲೋಚಿಸುವುದು

ಉಪಾಧ್ಯಕ್ಷರು : ಈ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ 2ರಿಂದ 4ನೇ ಖಂಡಗಳು, ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರಬೇಕು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ 2 ಮತ್ತು 4ನೇ ಖಂಡಗಳು ವಿಧೇಯಕಕ್ಕೆ ಸೇರಿಸಲ್ಪಟ್ಟಿತು.

ಮೊದಲನೇ ಖಂಡ ಹೆಸರು ಮತ್ತು ಅವತರಣಿಕೆ.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆಗಳು ವಿಧೇಯಕದ ಅಂಗಗಳು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಮೊದಲನೆ ಖಂಡ, ಹೆಸರು ಮತ್ತು ಅವತರಣಿಕೆಗಳು ವಿಧೇಯಕಕ್ಕೆ ಸೇರಿಸಲ್ಪಟ್ಟವು)

ಅನುಮೋದನಾ ಪ್ರಸ್ತಾವ

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ, ಸಂಸದೀಯ ವ್ಯವಹಾರಗಳ ಮಂತ್ರಿ) : ಮಾನ್ಯ ಉಪಾಧ್ಯಕ್ಷರೇ, 1991ನೇ ಸಾಲಿನ ಕರ್ನಾಟಕ ಕೃಷಿ ಆದಾಯ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ 1991ನೇ ಸಾಲಿನ ಕರ್ನಾಟಕ ಕೃಷಿ ಆದಾಯ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಕರ್ನಾಟಕ ವೃತ್ತಿಗಳ, ಕಸಬುಗಳ, ಅಜೀವಿಕೆಗಳ ಮತ್ತು ಉದ್ಯೋಗಗಳ ಮೇಲಣ ತೆರಿಗೆ (ತಿದ್ದುಪಡಿ) ವಿಧೇಯಕ 1991

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ. ವೀರಪ್ಪಮೊಯಿಲಿ (ಶಿಕ್ಷಣ ಸಚಿವರು) : (ಮುಖ್ಯಮಂತ್ರಿಗಳ ಪರವಾಗಿ) ಸನ್ಮಾನ್ಯ ಅಧ್ಯಕ್ಷರೇ, 1991ನೇ ಸಾಲಿನ ಕರ್ನಾಟಕ ವೃತ್ತಿಗಳ, ಕಸಬುಗಳ, ಅಜೀವಿಕೆಗಳ ಮತ್ತು ಉದ್ಯೋಗಗಳ ಮೇಲಣ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಶ್ರೀ ಎಂ. ವೀರಪ್ಪಮೊಯಿಲಿ : ಸನ್ಮಾನ್ಯ ಅಧ್ಯಕ್ಷರೇ, ಇದು ವೃತ್ತಿಗಳ ಮತ್ತು ಕಸಬುಗಳ ವಿಚಾರದಲ್ಲಿ, ವೃತ್ತಿ ತೆರಿಗೆಯನ್ನು ಹೆಚ್ಚುಮಾಡುವಂಥ ಒಂದು ಮಸೂದೆ. ಇದರ ಬಗ್ಗೆ ಸನ್ಮಾನ್ಯ ಉಪನಾಯಕರು ಬೆಳಿಗ್ಗೆ ಮಾತನಾಡಿದ್ದಾರೆ. ಪ್ರಮುಖವಾಗಿ ಉಪನಾಯಕರು ಒಂದು ಪ್ರಶ್ನೆಯನ್ನು ಎತ್ತಿದ್ದಾರೆ. ಇದು ವಾಣಿಜ್ಯ ವಿದ್ಯಾಸಂಸ್ಥೆಗಳಿಗೆ ಸಂಬಂಧಪಟ್ಟಿದ್ದು. ಅವರು ಯಾವುದೇ ಕ್ಯಾಪಿಟೇಷನ್ ಫೀ ತೆಗೆದುಕೊಳ್ಳುವುದಿಲ್ಲ. ಬಡವರು ಟೈಪಿಂಗ್ ಕ್ಲಾಸಿಗೆ ಬರುತ್ತಾರೆ. ಎಂದು ಈ ಸದನದಲ್ಲಿಯೂ ಹೇಳಿದ್ದಾರೆ. ಆಸದನದಲ್ಲಿಯೂ ಇದು ಪ್ರಸ್ತಾಪಕ್ಕೆ ಬಂತು. ಇದರ ಬಗ್ಗೆ ಸಾಕಷ್ಟು ನಿವೇದನೆ

ಮಾಡಿದ್ದಾರೆ. ಮುಖ್ಯಮಂತ್ರಿಗಳಿಗೂ ನಿವೇದನೆ ಮಾಡಿದ್ದಾರೆ. ನಾವೂ ಕೂಡ ವಾಣಿಜ್ಯ ವಿದ್ಯಾಸಂಸ್ಥೆಗಳ ಬಗ್ಗೆ ವಿಚಾರ ಮಾಡಿದ್ದೇವೆ. ಇದನ್ನು ಸರ್ಕಾರ ಗಮನದಲ್ಲಿಟ್ಟುಕೊಂಡು ಇದರ ಬಗ್ಗೆ ವಿಚಾರ ಮಾಡಿ, ಮುಂದೆ ಇವರಿಗೆ ಏನಾದರೂ ಪರಿಹಾರ ಕೊಡುವುದಕ್ಕೆ ಸಾಧ್ಯವಿದ್ದರೆ ಅದನ್ನು ಪರಿಗಣನೆ ಮಾಡುತ್ತೇವೆ.

ಶ್ರೀ ಪಿ.ಜಿ.ಆರ್. ಸಿಂಧ್ಯ : ಅವರಿಗೆ ಏನೂ ಉಳಿಯುವುದಿಲ್ಲ. ಒಂದು ಸಾವಿರ ಅಥವಾ ಒಂದೂವರೆ ಸಾವಿರ ಉಳಿದರೇ ಅದೇ ಜಾಸ್ತಿ. ನೀವು ಎರಡೂವರೆ, ಮೂರು ಸಾವಿರ ಹಾಕಿದ್ದೀರಿ. ಈಗ ನಮ್ಮಿಂದ ಪಾಸ್ ಮಾಡಿಸಿಕೊಳ್ಳುತ್ತೀರಿ, ಮುಂದೆ ಯಾವರೀತಿಯ ಪರಿಹಾರ ಕೊಡುತ್ತೀರಿ.?

ಶ್ರೀ ಎಂ. ವೀರಪ್ಪಮೊಯಿಲಿ : ಸನ್ಮಾನ್ಯ ಉಪನಾಯಕರು ಎತ್ತಿರತಕ್ಕ ವಿಚಾರವನ್ನು ನಮ್ಮ ಸರ್ಕಾರ ಗ್ರಹಿಸಿದೆ. ದರ ಬಗ್ಗೆ ವಿಚಾರ ಮಾಡಿ ನಿರ್ಣಯ ಮಾಡುತ್ತದೆ. ಇದಕ್ಕೆ ತಾವು ಒಪ್ಪಿಗೆಯನ್ನು ಕೊಟ್ಟಮೇಲೆ . ಪರಿಹಾರದ ಬಗ್ಗೆ ಯೋಚಿಸುತ್ತೇವೆ. ಅನೇಕ ಸಂದರ್ಭಗಳಲ್ಲಿ ಮಸೂದೆಗೆ ಒಪ್ಪಿಗೆ ಕೊಟ್ಟಮೇಲೂ, ಅನೇಕ ಅನುಕೂಲತೆಗಳಾಗಿವೆ. ಆದ್ದರಿಂದ ಈ ದಿಸೆಯಲ್ಲಿ ಸರ್ಕಾರ ಅವರಿಗೆ ಪರಿಹಾರ ಕೊಡುವ ಆಲೋಚನೆಯಲ್ಲಿದೆ ಎಂದು ಇಷ್ಟು ಮಾತ್ರ ಹೇಳಬಹುದು.

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ 1991ನೇ ಸಾಲಿನ ಕರ್ನಾಟಕ ವೃತ್ತಿಗಳ ಕಸುಬುಗಳ ಅಜೀವಿಕೆಗಳ ಮತ್ತು ಉದ್ಯೋಗಗಳ ಮೇಲಣ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು.

ಖಂಡ 2 ಇತ್ಯಾದಿ :

ಉಪಾಧ್ಯಕ್ಷರು : ಖಂಡ 2 ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಖಂಡ 2 ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ "ಮೊದಲನೇ ಖಂಡ, ದೀರ್ಘ ಶೀರ್ಷಿಕೆ, ಹೆಸರು ಮತ್ತು ಅವತರಣಿಕೆಗಳು ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲಾಯಿತು

(ಮೊದಲನೇ ಖಂಡ, ದೀರ್ಘ ಶೀರ್ಷಿಕೆ ಹೆಸರು ಮತ್ತು ಅವತರಣಿಕೆಗಳು ಈ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ಸಚಿವರು): ಮಾನ್ಯ ಅಧ್ಯಕ್ಷರೇ, 1991ನೇ ಸಾಲಿನ ಕರ್ನಾಟಕ ವೃತ್ತಿಗಳ, ಕಸುಬುಗಳ, ಅಜೀವಿಕೆಗಳ ಮತ್ತು ಉದ್ಯೋಗಗಳ ಮೇಲಣ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ 1991ನೇ ಕರ್ನಾಟಕ ವೃತ್ತಿಗಳ, ಕಸಬುಗಳ, ಅಜೀವಿಕೆಗಳ ಮತ್ತು ಉದ್ಯೋಗಗಳ ಮೇಲಣ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

1991ನೇ ಸಾಲಿನ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕ ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ. ವೀರಪ್ಪಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಉಪಾಧ್ಯಕ್ಷಣಿಯವರೇ, 1991ನೇ ಸಾಲಿನ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಉಪಾಧ್ಯಕ್ಷಣಿಯವರು : ಪ್ರಸ್ತಾವ ಏನೆಂದರೆ

1991 ನೇ ಸಾಲಿನ ಕರ್ನಾಟಕ ಮಾರಾಟತೆರಿಗೆ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಪರ್ಯಾಲೋಚನೆಗೆ ತೆಗೆದುಕೊಳ್ಳುವುದು.

ಪ್ರಸ್ತಾವವನ್ನು ಮಂಡಿಸಲಾಯಿತು.

ಶ್ರೀ ಎಂ. ವೀರಪ್ಪಮೊಯಿಲಿ : ಸನ್ಮಾನ್ಯ ಉಪಾಧ್ಯಕ್ಷರೇ, ಇದೂ ಕೂಡಾ ನಮ್ಮ ಆಯವ್ಯಯಕ್ಕೆ ಪೂರಕವಾಗಿ ತಂದಂಥ ತಿದ್ದುಪಡಿಯಾಗಿದೆ. ಆದರೆ ಇದರ ಕ್ಲಾಸ್ (2) ಗೆ ಒಂದು ಅಮೆಂಡ್‌ಮೆಂಟ್ ತರುತ್ತಿದ್ದೇನೆ. ಅದನ್ನು ಮಾತ್ರ ಸೃಷ್ಟೀಕರಣ ಗೊಳಿಸಬೇಕೇ ಹೊರತು ಹೊಸದಾಗಿ ಏನು ಮಾಡತಕ್ಕದ್ದು ಇಲ್ಲ. ಕ್ಲಾಸ್ 2ಗೆ ಸರಕಾರದ ಪರವಾಗಿ ಈ ಕೆಳಕಂಡ ತಿದ್ದುಪಡಿಯನ್ನು ಪ್ರಪೋಸ್ ಮಾಡುತ್ತೇನೆ.

ಉಪಾಧ್ಯಕ್ಷಣಿಯವರು : ಮಾನ್ಯ ಮಂತ್ರಿಗಳು ಈಗ ಖಂಡ ಎರಡಕ್ಕೆ ತಿದ್ದುಪಡಿಯನ್ನು ಮಂಡಿಸಬೇಕು.

CLAUSE 2

In Clause 2 of the said Bill, after item (2), the following shall be inserted, namely :

"(3) in the provio to the clause (v), after the word and punctuation mark 'otherwise', the words 'other than the proceeds of the sale by a company relating to peper, cardamom or rubber grown within the State by such Company' shall be inserted".

ಇದೊಂದು ಅಮೆಂಡ್‌ಮೆಂಟ್ ಆಮೇಲೆ ಅನುನೋದನೆ ಮಾಡುತ್ತೇನೆ. ಇದಕ್ಕೆ ಸಭೆ ಮನ್ನಣೆ ಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

ಉಪಾಧ್ಯಕ್ಷಣಿಯವರು : ತಿದ್ದುಪಡಿಯನ್ನು ಮಂಡಿಸಲಾಗಿದೆ. ಈಗ ತಿದ್ದುಪಡಿಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಶ್ರೀ ಹೆಚ್. ಏಕಾಂತಯ್ಯ : ನಿಮ್ಮ ಕಾಲದಲ್ಲಿ ಹೀಗೆ ಆಗುತ್ತಾ ಎಂದು ನಾನು ಎಣಿಸಿರಲಿಲ್ಲ, ಅನುಪೂರಕ ಬೇಡಿಕೆಗಳ ಬಗ್ಗೆ ಮಾತನಾಡುವುದಕ್ಕೆ ಅವಕಾಶ ಸಿಗಲೇ ಇಲ್ಲ. ಅದನ್ನು ತಪ್ಪಿಸಿ ಈ ರೀತಿ ಮಾಡುತ್ತಿದ್ದೀರಿ.